RNU AIR DHARWAD

**JUNE 29, 2025**

**AKASHAVANI - DHARWAD**

**PRADESH SAAMACHARA (KANNADA) 7.05 A.M**

**ಮುಖ್ಯಾಂಶಗಳು**

- ದೇಶದಲ್ಲಿ ಬೌದ್ಧಿಕ ಆಸ್ತಿ ಹಾಗೂ ಅದರ ಕಾರ್ಯತಂತ್ರದ ಬಳಕೆಯ ತಿಳಿವಳಿಕೆ ಬಲಪಡಿಸುವುದು ಇಂದಿನ ಅಗತ್ಯ – ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್
- ನಾಡ ಹಬ್ಬ ದಸರಾ ಅದ್ದೂರಿ ಆಚರಣೆಗೆ ಸರ್ಕಾರದ ನಿರ್ಧಾರ; ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡುವಂತೆ ಮುಖ್ಯಮಂತ್ರಿ ಸೂಚನೆ.
- ರಾಜ್ಯಾದ್ಯಂತ ಮುಂದುವರೆದ ಮಳೆ; ಪರಿಸ್ಥಿತಿ ನಿರ್ವಹಣೆಗೆ ಜಿಲ್ಲಾಡಳಿತಗಳು ಸನ್ನದ್ಧ.
- ಆಕಾಶವಾಣಿ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ, ಇಂದು ಜನತೆಯನ್ನು ಉದ್ದೇಶಿಸಿ ಮಾತನಾಡಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ.

**ಈಗ ವಾರ್ತೆಗಳ ವಿವರ**

**ದೇಶದಲ್ಲಿ ಬೌದ್ಧಿಕ ಆಸ್ತಿ ಮತ್ತು ಅದರ ಕಾರ್ಯತಂತ್ರದ ಬಳಕೆಯ ತಿಳಿವಳಿಕೆಯನ್ನು ಮತ್ತಷ್ಟು ಬಲಪಡಿಸುವ ಅವಶ್ಯಕತೆ ಇದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದ್ದಾರೆ. ಕೈಗಾರಿಕಾ ನಾವೀನ್ಯತೆ ಮತ್ತು ಸಂಶೋಧನಾ ಮಂಡಳಿ ಹಾಗೂ ಜೈನ್ ಡೀಮ್ಡ್ ವಿಶ್ವವಿದ್ಯಾಲಯ ಬೆಂಗಳೂರಿನಲ್ಲಿ ಆಯೋಜಿಸಿದ್ದ, ಆವಿಷ್ಕಾರ, ಬೌದ್ಧಿಕ ಸಂಪತ್ತು ಮತ್ತು ಉದ್ಯಮಾಧಾರಿತ ಬೆಳವಣಿಗೆಗೆ ರಾಷ್ಟ್ರಮಟ್ಟದ ಆಂದೋಲನ 'ಇನೋವ ಸ್ಥಾನ್–ವಿಚಾರದಿಂದ ವಿಕಾಸಯಾತ್ರೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಚಿಂತನೆ, ತತ್ವಶಾಸ್ತ್ರ ಮತ್ತು ನಾವೀನ್ಯತೆ ಭಾರತದ ಆತ್ಮದ ತಿರುಳಾಗಿವೆ. ಪ್ರಪಂಚದಾದ್ಯಂತ ಸ್ಪರ್ಧೆ ಉತ್ತುಂಗದಲ್ಲಿರುವ ಇಂದಿನ ಸಮಯದಲ್ಲಿ, ಭಾರತವನ್ನು ಸ್ವಾವಲಂಬಿಯನ್ನಾಗಿ ಮತ್ತು ಜಾಗತಿಕ ನಾಯಕನನ್ನಾಗಿ ಮಾಡಲು ನಾವೀನ್ಯತೆಯ ಶಕ್ತಿಯ ಮೂಲಕ ಮಾತ್ರ ಸಾಧ್ಯ. ದೇಶದಲ್ಲಿ ನಾವೀನ್ಯತೆ ಕೇವಲ ಪ್ರಯೋಗಾಲಯಕ್ಕೆ ಸೀಮಿತವಾಗಿಲ್ಲ, ಬದಲಾಗಿ ನೀತಿ, ಶಿಕ್ಷಣ, ಕೈಗಾರಿಕೆ ಮತ್ತು ಸಮಾಜದ ಭಾಗವಾಗಿವೆ ಎಂದು ತಿಳಿಸಿದರು.**

<><><>

**ನಾಡ ಹಬ್ಬ ದಸರಾವನ್ನು ಈ ಬಾರಿ ವೈಭವದಿಂದ ಆಚರಿಸಲು ನಿರ್ಧರಿಸಲಾಗಿದ್ದು, ಸೆಪ್ಟೆಂಬರ್ 22ರಂದು ದಸರಾ ಹಬ್ಬಕ್ಕೆ ಚಾಲನೆ ದೊರೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ನಾಡಹಬ್ಬ ಮೈಸೂರು ದಸರಾ–2025 ರ ಆಚರಣೆ ಕುರಿತು ಬೆಂಗಳೂರಿನಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಮಾತನಾಡಿದ ಅವರು, ದಸರಾ ಈ ಬಾರಿ 10 ದಿನಗಳ ಬದಲು 11 ದಿನಗಳ ಕಾಲ ನಡೆಸಲು ನಿರ್ಧರಿಸಲಾಗಿದೆ. ಕಳೆದ ಬಾರಿ 40 ಕೋಟಿ ರೂಪಾಯಿ ಅನುದಾನ ಒದಗಿಸಲಾಗಿತ್ತು. ಈ ಬಾರಿ ಅದ್ದೂರಿ ದಸರಾಗೆ ಹೆಚ್ಚಿನ ಅನುದಾನ ಒದಗಿಸಲಾಗುವುದು ಎಂದು ತಿಳಿಸಿದರು. ವಿಜೃಂಭಣೆಯ ಭರದಲ್ಲಿ ಚಾರಿತ್ರಿಕ ಮಹತ್ವವನ್ನು ಮರೆಯಬಾರದು. ಅನಗತ್ಯವಾಗಿ ಖರ್ಚು ಮಾಡುವುದು ವೈಭವವಲ್ಲ, ಬದಲಾಗಿ ಸಾರ್ವಜನಿಕರ ಸುರಕ್ಷತೆಗೆ ಮತ್ತು ಅನುಕೂಲಕ್ಕೆ ಪ್ರಥಮ ಆದ್ಯತೆ ನೀಡಬೇಕು. ದಸರಾಕ್ಕೆ ತನ್ನದೇ ಆದ ಚಾರಿತ್ರಿಕ, ಧಾರ್ಮಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆ ಇದೆ. ಇದಕ್ಕೆ ಪೂರಕವಾಗಿ ವಿಶ್ವವಿಖ್ಯಾತ ದಸರಾವನ್ನು ಆಚರಿಸಲಾಗುವುದು. ದಸರಾ ಸಂದರ್ಭದಲ್ಲಿ ಜನದಟ್ಟಣೆ ನಿಯಂತ್ರಣಕ್ಕೆ ಒತ್ತು ನೀಡಬೇಕು. ಈ ಬಾರಿ 10 ಲಕ್ಷಕ್ಕೂ ಅಧಿಕ ಮಂದಿ ಸೇರುವ ಸಾಧ್ಯತೆ ಇದ್ದು, ವಿದೇಶಿಯರು ಆಗಮಿಸಲಿದ್ದಾರೆ. ಯಾರಿಗೂ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.**

<><><>

ಜುಲೈ 3ರ ವರೆಗೂ ಮಳೆ ಮುಂದುವರೆಯಲಿದೆ ಎಂದು ರಾಜ್ಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೊಡಗು ಜಿಲ್ಲೆಗೆ ರೆಡ್ ಅಲರ್ಟ್, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಹಾಸನ ಹಾಗೂ ಶಿವಮೊಗ್ಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಹಾಗೂ ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ವಿಜಯನಗರ, ರಾಮನಗರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ನೆರೆಯ ಮಹಾರಾಷ್ಟ್ರದಲ್ಲಿ ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆ, ಬೆಳಗಾವಿ ಜಿಲ್ಲೆಯಲ್ಲಿನ ನದಿಗಳ ಒಳಹರಿವು ಹೆಚ್ಚಾಗುತ್ತಿದೆ. ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಸಂಭವಿಸಬಹುದಾದ ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋ ’ನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯಲ್ಲಿ ಮಾತನಾಡಿದ ಅವರು, ಪ್ರವಾಹ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ನೋಡಲ್ ಅಧಿಕಾರಿಗಳು ನಿಯಮಿತವಾಗಿ ಸಭೆಗಳನ್ನು ಜರುಗಿಸಿ ಪ್ರವಾಹ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು. ಅತಿಯಾದ ಮಳೆಯಿಂದ ಹಾನಿಗೊಂಡ ರಸ್ತೆ ಹಾಗೂ ಮೋರಿಯನ್ನು ರಕ್ಷಣಾ ತಡೆಗೋಡೆಯೊಂದಿಗೆ ಪುನರ್ ನಿರ್ಮಿಸುವ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆ, ಸಾರ್ವಜನಿಕರ ಹಿತದೃಷ್ಠಿಯಿಂದ ಕಾಮಗಾರಿ ಸುಗಮವಾಗಿ ನಡೆಸಲು ಜುಲೈ 30 ರವರೆಗೆ ಸಿದ್ಧಾಪುರ–ಹೆಬ್ರಿ ರಾಜ್ಯ ಹೆದ್ದಾರಿಯ ಮಾರ್ಗದಲ್ಲಿ ಎಲ್ಲಾ ರೀತಿಯ ವಾಹನ ಸಂಚಾರವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಿ, ಬದಲಿ ಮಾರ್ಗವಾಗಿ ಗ್ರಾಮೀಣ ರಸ್ತೆಯಾದ ಮಾಂಡಿಮೂರುಕೈ–ಮೀನುಗದ್ದೆ–ಬೇಳಂಜೆ–ಕುಚ್ಚೂರು–ಹೆಬ್ರಿ ರಸ್ತೆ ಮೂಲಕ ಸಂಚರಿಸುವಂತೆ ಆದೇಶಿಸಿ, ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಆದೇಶಿಸಿದ್ದಾರೆ. ತುಂಗಭದ್ರ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರನ್ನು ಯಾವುದೇ ಕ್ಷಣದಲ್ಲಿ ನದಿಗೆ ಬಿಡಬಹುದು. ನದಿ ದಂಡೆಯ ನಿವಾಸಿಗಳು ಎಚ್ಚರಿಕೆಯಿಂದ ಇರಬೇಕು ಎಂದು ತುಂಗಭದ್ರ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ **x** ಖಾತೆ **@airnews_dharwad** ಹಾಗೂ

ನಮ್ಮ ಫೇಸ್ಬುಕ್ ಖಾತೆ **Airrnu Dharwad** ಅನುಸರಿಸಿ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇಂದು ಬೆಳಗ್ಗೆ 11 ಗಂಟೆಗೆ ದೇಶ–ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ 123ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆ್ಯಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ನೀವು ಈ ಕಾರ್ಯಕ್ರಮವನ್ನು ಕೇಳಬಹುದು.

<><><>

ಇಂದು, ಅಂಕಿ–ಅಂಶಗಳ ಮಹತ್ವ ಹಾಗೂ ಅದರ ಪ್ರಾಮುಖ್ಯತೆ ಬಿಂಬಿಸುವ, ರಾಷ್ಟ್ರೀಯ ಸಂಖ್ಯಾಶಾಸ್ತ್ರ ದಿನ. ದೇಶದ ಹೆಸರಾಂತ ಸಂಖ್ಯಾಶಾಸ್ತ್ರಜ್ಞ ಪಿ.ಸಿ. ಮಹಾಲನೊಬಿಸ್ ಅವರ ಜನ್ಮ ದಿನವಾದ ಜೂನ್ 29 ರಂದು, ರಾಷ್ಟ್ರೀಯ ಸಂಖ್ಯಾಶಾಸ್ತ್ರ ದಿನವನ್ನಾಗಿ ಆಚರಿಸಲಾಗುತ್ತದೆ. ಈ ದಿನದ ವಿಶೇಷತೆಯ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಧಾರವಾಡದ ಸಂಖ್ಯಾಶಾಸ್ತ್ರ ಸಂಶೋಧಕ ಹಾಗೂ ನಿವೃತ್ತ ಪ್ರಾಧ್ಯಾಪಕ ಸೀತಾರಾಮ ಎನ್.ಹೆಗಡೆ.
ಧ್ವನಿ– ಸೀತಾರಾಮ ಎನ್.ಹೆಗಡೆ. (60 ಸೆಕೆಂದುಗಳು)

<><><>

ಈಗ ಸಂಕ್ಷಿಪ್ತ ಸುದ್ದಿಗಳು

ಹುಬ್ಬಳ್ಳಿಯ ಶ್ರೀಗುರುಬಸವ ಮಂಟಪ ಟ್ರಸ್ಟ್ ಕಮೀಟಿ ಹಾಗೂ ಕರ್ನಾಟಕ ವಿಶ್ವವಿದ್ಯಾಲಯದ ಶ್ರೀ ಬಸವೇಶ್ವರ ಪೀಠ, ಆಕಾಶವಾಣಿ ಧಾರವಾಡ ಹಾಗೂ ಹುಬ್ಬಳ್ಳಿ ಮತ್ತು ಧಾರವಾಡದ ಬಸವ ಕೇಂದ್ರಗಳ ಸಹಯೋಗದಲ್ಲಿ, ಇಂದು ಸಂಜೆ 6 ಗಂಟೆಗೆ, ಹುಬ್ಬಳ್ಳಿಯ ಶ್ರೀ ಗುರುಬಸವ ಮಂಟಪ ಟ್ರಸ್ಟ್ ಸಭಾಂಗಣದಲ್ಲಿ 'ವಚನಾಮೃತ–200' ಕಾರ್ಯಕ್ರಮ ಆಯೋಜಿಸಲಾಗಿದೆ.

<><><>

ಕೋಲಾರ ನಗರದಲ್ಲಿ ನಾಳೆ ಸಾರ್ವಜನಿಕರ ಅನುಕೂಲಕ್ಕಾಗಿ ನಗರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಕೋಲಾರ ವಿಭಾಗದಿಂದ ನಾಲ್ಕು ಬಸ್‌ಗಳಿಂದ ಎರಡು ರೂಟ್‌ಗಳನ್ನು ಒಳಗೊಂಡಂತೆ ನಗರ ಸಾರಿಗೆಯನ್ನು ಆರಂಭಿಸಲಾಗುತ್ತಿದೆ. ಈ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್ ಸುರೇಶ್ ಚಾಲನೆ ನೀಡಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎಂ.ಆರ್ ರವಿ ತಿಳಿಸಿದ್ದಾರೆ.

<><><>

ರಾಷ್ಟ್ರೀಯ ಕುಟುಂಬ ನೆರವು ಯೋಜನೆಯಡಿ ಕೋಲಾರ ಜಿಲ್ಲೆಯು ಶೇಕಡ 100 ರ ಷ್ಟು ಪ್ರಗತಿ ಸಾಧಿಸಿರುವುದಕ್ಕೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾಕ್ಟರ್ ಶಾಲಿನಿ ರಜನೀಶ್ ಶ್ಲಾಘಿಸಿದ್ದಾರೆ.

<><><>